**ಕರ್ನಾಟಕ ಸರ್ಕಾರ**

**ಕಾಲೇಜು ಶಿಕ್ಷಣ ಇಲಾಖೆ**

**ಕನ್ನಡ ಕಾಯಕ ವರ್ಷ ೨೦೨೦-೨೧**

ಸಂಖ್ಯೆ: ಕಾಶಿಇ/147/ಇತರೆ/ಸಿಆರ್-2/2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:15-06-2021.

## ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ/ ವಯೋನಿವೃತ್ತಿ ಹೊಂದಿರುವ ಬೋಧಕ/ಬೋಧಕೇತರ ಸಿಬ್ಬಂದಿಗಳ ಪಿಂಚಣಿ ಮಂಜೂರಾತಿ ಬಗ್ಗೆ.

*******

ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಗೊಳಪಡುವ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿಗಳಲ್ಲಿ ಪ್ರಭಾರ ಜಂಟಿ ನಿರ್ದೇಶಕರಾಗಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು/ಕಾನೂನು ಕಾಲೇಜು/ಬಿ.ಎಡ್. ಕಾಲೇಜು ಮತ್ತು ವಸತಿಯುಕ್ತ ಕಾಲೇಜುಗಳಲ್ಲಿ ತಮ್ಮ ಸೇವಾವಧಿಯಲ್ಲಿ ಪ್ರಾಂಶುಪಾಲರು/ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿರುವ/ವಯೋನಿವೃತ್ತಿ ಹೊಂದಿರುವ ಬೋಧಕ ಸಿಬ್ಬಂದಿಗಳ ಪಿಂಚಣಿ ಮಂಜೂರಾತಿಗೆ ಸಂಬಂಧಿಸಿದಂತೆ ಮತ್ತು ನಿವೃತ್ತಿ ನಂತರದ ಗಳಿಕೆ ರಜೆ ನಗದೀಕರಣ ಮಂಜೂರಾತಿ ಸಂಬಂಧ 03 ತಿಂಗಳ ಮೊದಲೇ ಇಲಾಖೆಗೆ ಪ್ರಸ್ತಾವನೆಯನ್ನು ಕಡ್ಡಾಯವಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ. ಇಲಾಖೆಗೆ ಕಳುಹಿಸದೇ ತಮ್ಮ ಹಂತದಲ್ಲಿಯೇ ಮಂಜೂರಾತಿಗೆ ಕ್ರಮವಹಿಸಿದ್ದಲ್ಲಿ ಮುಂದಿನ ಆಗುಹೋಗುಗಳಿಗೆ ತಮ್ಮನ್ನೇ ನೇರ ಹೊಣೆಗಾರರನ್ನಾಗಿ ಮಾಡಿ ಶಿಸ್ತು ಕ್ರಮಕೈಗೊಳ್ಳಲು ಕ್ರಮ ವಹಿಸಲಾಗುವುದೆಂದು ಸಹ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

ಮೇಲೆ ವಿವರಿಸಿರುವಂತೆ ಹೊರತುಪಡಿಸಿ ಉಳಿದಂತೆ ತಮ್ಮ ಕಛೇರಿ/ಕಾಲೇಜುಗಳ ಹಂತದಲ್ಲಿಯೇ ಸಿಬ್ಬಂದಿಗಳ ಪಿಂಚಣಿ ಪ್ರಸ್ತಾವನೆಗಳನ್ನು ಮಹಾಲೇಖಪಾಲರಿಗೆ ನೇರವಾಗಿ ಕಳುಹಿಸಿ ಅದರ ಪ್ರತಿಯೊಂದನ್ನು ಹಾಗೂ ನಿವೃತ್ತಿ ನಂತರದ ಗಳಿಕೆ ರಜೆ ನಗದೀಕರಣ ಮತ್ತು ಸಾಮೂಹಿಕ ವಿಮೆ ಮಂಜೂರಾತಿಯ ಪ್ರತಿಗಳನ್ನು ಇಲಾಖೆಗೆ ಸಲ್ಲಿಸಲು ಸೂಚಿಸಿದೆ

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು/ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2) ಕಛೇರಿ ಪ್ರತಿ.

Ciruclar